**ಅಪರ ಸಿವಿಲ್  ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ದೊಡ್ಡಬಳ್ಳಾಪುರ**

**ಸಿ ಸಿ ನಂ : 571/2016**

**ಪಿ ಡಬ್ಲ್ಯೂ - 3**

**ಸಿ ಡಬ್ಲ್ಯೂ - 5**

**ದಿಃ 27.10.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಹೆಸರು ಃ ಶಿವಶಂಕರಪ್ಪ**

**ತಂದೆಯ ಹೆಸರು ಃ ಮುದ್ದುವೀರಪ್ಪ**

**ವಯಸ್ಸು ಃ 57 ವರ್ಷ**

**ಉದ್ಯೋಗ ಃ ವ್ಯವಸಾಯ**

**ವಿಳಾಸ ಃ ಗಂಡಗೋವಿಪುರ ಗ್ರಾಮ, ದೊಡ್ಡಬಳ್ಳಾಪುರ ತಾಲ್ಲೂಕು**

**ಮುಖ್ಯ ವಿಚಾರಣೆ ಃ ಸ ಸ ಅ ರವರಿಂದ**

ಆರೋಪಿತರು ಗೊತ್ತು. ಚಾಸಾ-1 ರಿಂದ 4 ರವರು ಗೊತ್ತು. ಚಾಸಾ-1 ಮತ್ತು 1 ನೇ ಆರೋಪಿಯ ಮದುವೆಯನ್ನು ಸುಮಾರು 12 ವರ್ಷಗಳ ಹಿಂದೆ ನೆಲಮಂಗಲದಲ್ಲಿ ಮಾಡಿಕೊಡಲಾಗಿತ್ತು. ಮದುವೆಯ ಸಂದರ್ಭದಲ್ಲಿ ಏನು ಕೊಡಲಾಗಿತ್ತು ಎಂದು ಗೊತ್ತಿಲ್ಲ. ಅವರಿಬ್ಬರ ದಾಂಪತ್ಯ ಜೀವನದ ಬಗ್ಗೆಯೂ ನನಗೆ ಯಾವುದೇ ವಿಚಾರ ಗೊತ್ತಿಲ್ಲ. ಸಾಕ್ಷಿಯು ಪಂಚನಾಮೆಯಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.  ನಿಪಿ-2 ಕ್ಕೆ  ನಾನು ಎಲ್ಲಿ ಮತ್ತು ಯಾವಾಗ ಸಹಿ ಮಾಡಿರುತ್ತೇನೆಂದು ಗೊತ್ತಿಲ್ಲ.  ನಿಪಿ-2 ರಲ್ಲಿನ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಮುಂದೆ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ.ನಾನು ಪೋಲೀಸರಿಗೆ ಹೇಳಿಕೆಯನ್ನು ಕೊಟ್ಟಿಲ್ಲ.

**(ಈ ಹಂತದಲ್ಲಿ ಸ ಸ ಅ ರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಸ ಸ ಅ ರವರಿಂದ**

ಚಾಸಾ-1 ಮತ್ತು 1 ನೇ ಆರೋಪಿಯ ಮದುವೆಯ ಸಂದರ್ಭದಲ್ಲಿ ಗಂಡಿಗೆ ರೂ. 10 ಲಕ್ಷ ಹಾಗೂ 100 ಗ್ರಾಂ ಚಿನ್ನದ ಒಡವೆಗಳನ್ನು ಕೊಟ್ಟು ಮದುವೆ ಮಾಡಿಕೊಡುವಂತೆ ಆರೋಪಿತರು ಕೇಳಿಕೊಂಡಿದ್ದರು ಎಂದರೆ ಸರಿಯಲ್ಲ. ಅದಕ್ಕೆ ಒಪ್ಪದ ಚಾಸಾ-2 ರವರು ಗಂಡಿಗೆ 35 ಗ್ರಾಂ ಚಿನ್ನದ ಒಡವೆ ಹಾಗೂ ರೂ. 1 ಲಕ್ಷ ಕೊಡುವುದಾಗಿ ತೀರ್ಮಾನ ಮಾಡಲಾಗಿ ಅದರಂತೆ ಬಟ್ಟೆ ಬರೆಗಳನ್ನು ಹಾಗೂ ಚಾಸಾ-1 ರವರಿಗೂ ಒಡವೆಗಳನ್ನು ಕೊಟ್ಟು ಅದ್ದೂರಿಯಾಗಿ ಮದುವೆ ಮಾಡಿದ್ದರು ಎಂದರೆ ಸಾಕ್ಷಿಯು ಮದುವೆ ಮಾಡಿದ್ದರು ಉಳಿದ ವಿಚಾರ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಮದುವೆಯಾದ ಎರಡೇ ದಿನಗಳಲ್ಲಿ 1 ನೇ ಆರೋಪಿ ಚಾಸಾ-1 ರವರಿಗೆ ಕೇಳಿದಷ್ಟು ಹಣ ಕೊಟ್ಟಿಲ್ಲವೆಂದು ಗಲಾಟೆ ಮಾಡಿದ ವಿಚಾರ ನನಗೆ ತಿಳಿಯಿತು ಎಂದರೆ ಸರಿಯಲ್ಲ. ಆರೋಪಿತರು ರೂ. 10 ಲಕ್ಷ ವರದಕ್ಷಿಣೆ ಹಣ ತರಬೇಕೆಂದು ಬೇಡಿಕೆ ಇಟ್ಟಿದ್ದರು ಎಂದರೆ ಸರಿಯಲ್ಲ. ಹಣವನ್ನು ತರದೇ ಇದ್ದ ಕಾರಣ ಚಾಸಾ-1 ರವರಿಗೆ ಆರೋಪಿತರು ಮಾನಸಿಕ ಹಾಗೂ ದೈಹಿಕ ಹಿಂಸೆ ಕೊಡುತ್ತಿದ್ದರು ಎಂದರೆ ಗೊತ್ತಿಲ್ಲ. ಈ ವಿಚಾರವಾಗಿ ಸಾಕಷ್ಟು ಪಂಚಾಯಿತಿ ಕೂಡ ಆಗಿತ್ತು ಎಂದರೆ ಗೊತ್ತಿಲ್ಲ. ಹಣದ ವಿಚಾರವಾಗಿ ಆರೋಪಿತರು ಚಾಸಾ-1 ರವರಿಗೆ ಹೊಡೆದು ಮಲಗಿಸಿದ್ದ ಹಾಗೂ ಚಾಸಾ-1 ರವರಿಗೆ ಚಿಕಿತ್ಸೆ ಕೊಡಿಸಿದ ಬಗ್ಗೆ ಚಾಸಾ-2 ನನಗೆ ತಿಳಿಸಿದ್ದರು ಎಂದರೆ ಸರಿಯಲ್ಲ. ನಂತರ ಚಾಸಾ-2 ರೂ. 1 ಲಕ್ಷ ಹಣವನ್ನು 1 ನೇ ಆರೋಪಿಗೆ ಕೊಟ್ಟಿದ್ದರು ಎಂದರೆ ಸರಿಯಲ್ಲ. ಆದರೂ ಆರೋಪಿತರು ಚಾಸಾ-1 ರವರಿಗೆ ಮತ್ತಷ್ಟು ಹಣ ಕೇಳಿ ಗಲಾಟೆ ಮಾಡಿ ಮನೆಯಿಂದ ಹೊರಗೆ ಹಾಕಿದ್ದರು ಎಂದರೆ ಗೊತ್ತಿಲ್ಲ. ಈ ಕುರಿತು ಚಾಸಾ-1 ಪೋಲೀಸರಿಗೆ ದೂರನ್ನು ನೀಡಿದ್ದು, ಆ ನಂತರ ಪೋಲೀಸರು ಘಟನಾ ಸ್ಥಳಕ್ಕೆ ಬಂದು ಸಂಜೆ 4-00 ರಿಂದ 5-00 ಗಂಟೆಯವರಗೆ ಪಂಚನಾಮೆಯನ್ನು ಮಾಡಿ ನಿಪಿ-2 ಕ್ಕೆ ಸಹಿಯನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಂದರ್ಭದಲ್ಲಿ ಮದುವೆಯ ಲಗ್ನ ಪತ್ರಿಗೆ ಹಾಗೂ ಫೋಟೋಗಳನ್ನು ಅಮಾನತ್ತುಪಡಿಸಿಕೊಂಡಿದ್ದರು ಎಂದರೆ ಸರಿಯಲ್ಲ. ಸಾಕ್ಷಿಯು ನಿಪಿ-3 ರಿಂದ 5 ಗಳನ್ನು ನೋಡಿ ಗುರುತಿಸಿರುವುದಿಲ್ಲ. ದಿಃ 14.06.2014 ರಂದು ನಾನು ಪೋಲೀಸರಿಗೆ ಈ ಕುರಿತು ಈಗ ಓದಿ ಹೇಳಿದಂತೆ ನನ್ನ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ

ಹೇಳಿಕೆಯನ್ನು ನಿಪಿ-7 ಎದು ಗುರುತಿಸಲಾಯಿತು. ನಿಪಿ-2 ಮತ್ತು 7 ರಲ್ಲಿನ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u> ಆರೋಪಿತರ ಪರ ವಕೀಲರು ಇಲ್ಲ ಎಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಂದ ಕಂಪ್ಯೂಟರನಲ್ಲಿ ಮಾಡಿಸಲಾಯಿತು)**

**ಓ ಹೇ ಕೇ ಸ ಅದೆ**

**ಅಪರ ಸಿವಿಲ್ ನ್ಯಾ. ಮತ್ತು**
**ಜೆ.ಎಂ.ಎಫ್.ಸಿ, ದೊಡ್ಡಬಳ್ಳಾಪುರ**